ಆಂದೋಲನ

# ಎಟಿಎಂಇ ಕಾಲೇಜಿನಲ್ಲಿ ಕನ್ನಡ ರಾಜ್ಯೋತ್ಸವ ಸಡಗರ



ಮೈಸೂರು: ನಗರದ ಮೈಸೂರು-ಬನ್ನೂರು ರಸ್ತೆಯಲ್ಲಿರುವ ಎಟಿಎಂಇ ಕಾಲೇಜಿನಲ್ಲಿ 69ನೇ ಕನ್ನಡ ರಾಜ್ಯೋತ್ಸವವನ್ನು ಆಚರಿಸಲಾಯಿತು.

ಗಣ್ಯರು ನಾಡದೇವಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು. ನಂತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ನಾಡಗೀತೆ, ನಿತ್ಯೋತ್ಸವ ಗೀತೆಗಳನ್ನು ಹಾಡಿದರು.

ಈ ವೇಳೆ ಎಟಿಎಂಇ ಕಾಲೇಜಿನ ಆಡಳಿತಾಧಿಕಾರಿ ಡಾ.ಸಚ್ಚಿದಾನಂದ ಮೂರ್ತಿ ಮಾತನಾಡಿ, ಕನ್ನಡಿಗರು ಮಾತೃಭಾಷೆಯ ಬಳಕೆಯಲ್ಲಿ ಕೀಳರಿಮೆ ಹೊಂದಿರಬಾರದು. ಭಾಷೆಯ ಬೆಳವಣಿಗೆ ಮತ್ತು ಸಂಸ್ಕೃತಿಗೂ ಸಮಾನ ಗೌರವ ನೀಡುವ ಹೃದಯ ವೈಶಾಲ್ಯತೆ ಜೊತೆಗೆ ಶಾಂತಿ ಮತ್ತು ಸೌಹಾರ್ದತೆಯ ರಾಯಭಾರಿಗಳಾಗಬೇಕು ಎಂದು ತಿಳಿಸಿದರು.

ಇದಕ್ಕೂ ಮುನ್ನ ಅಧ್ಯಾಪಕ ಸಿ.ಚಂದ್ರಶೇಖರ್, ಸಿಬ್ಬಂದಿ ಮತ್ತು ವಿದ್ಯಾರ್ಥಿಗಳಿಗೆ ಕನ್ನಡ ಸಂಕಲ್ಪ ವಿಧಿಯನ್ನು ಬೋಧಿಸಿದರು. ನಂತರ ರಾಜ್ಯೋತ್ಸವದ ಅಂಗವಾಗಿ ಏರ್ಪಡಿಸಿದ್ದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳಿಗೆ ಬಹುಮಾನಗಳನ್ನು ವಿತರಿಸಲಾಯಿತು. ವಿದ್ಯಾರ್ಥಿಗಳು ಮತ್ತು ಸಿಬ್ಬಂದಿ ವರ್ಗದವರಿಗೆ ಕನ್ನಡ ನಾಡು-ನುಡಿಗೆ ಸಂಬಂಧಿಸಿದ ಕನ್ನಡ ಗೀತಗಾಯನ, ಏಕಪಾತ್ರಾಭಿನಯ, ಮಿಮಿಕ್ರಿ, ಜ್ಯೂಕ್ ಬಾಕ್ಸ್ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು.

ಎಟಿಎಂಇ ಕಾಲೇಜಿನ ಆಡಳಿತಾಧಿಕಾರಿ ಡಾ.ಸಚ್ಚಿದಾನಂದ ಮೂರ್ತಿ, ಡೀನ್ ಡಾ.ಕೆ.ಶ್ರೀನಿವಾಸ ಭಾಗವಹಿಸಿದ್ದರು. ವಿವಿಧ ವಿಭಾಗಗಳ ಮುಖ್ಯಸ್ಥರು, ಅಧ್ಯಾಪಕ ಮತ್ತು ಅಧ್ಯಾಪಕೇತರ ಸಿಬ್ಬಂದಿ, ವಿದ್ಯಾರ್ಥಿ-ವಿದ್ಯಾರ್ಥಿನಿಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

Main Edition
Dec 1, 2024 Page No. 7
Powered by: erelego.com